Akashvani: Bangalore
National Bulletin In Kannada
26.02.2026 : 13.10hrs
**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

26.02.2026 : 13.10hrs
********

**ಮುಖ್ಯಾಂಶಗಳು :**

1. ಭಯೋತ್ಪಾದನೆ ವಿರುದ್ಧದ ಹೋರಾಟದಲ್ಲಿ ಇಸ್ರೇಲ್ ಜತೆಗೆ ಭಾರತ ದೃಢವಾಗಿ ನಿಲ್ಲುತ್ತದೆ ; ಪ್ರಧಾನಿ ನರೇಂದ್ರ ಮೋದಿ
2. ಕರ್ನಾಟಕದಲ್ಲಿನ ಶಿವಮೊಗ್ಗ ಸೇರಿದಂತೆ ಸುತ್ತಮುತ್ತಲಿನ ೮ ಜಿಲ್ಲೆಗಳಿಗೆ ತನ್ನ ಪ್ರಸಾರ ವ್ಯಾಪ್ತಿಯನ್ನು ವಿಸ್ತರಿಸಿದ ಆಕಾಶವಾಣಿ
3. ರಾಜ್ಯಸಭೆಯ ೩೭ ಸ್ಥಾನಗಳಿಗೆ ಅಧಿಸೂಚನೆ ಹೊರಡಿಸಿದ ಚುನಾವಣಾ ಆಯೋಗ ; ಇಂದಿನಿಂದ ಮಾರ್ಚ್ ೫ರವರೆಗೆ ನಾಮಪತ್ರ ಸಲ್ಲಿಕೆ
4. ವಿಶ್ವಸಂಸ್ಥೆ ಮಾನವ ಹಕ್ಕುಗಳ ಮಂಡಳಿಯ ೬೧ನೇ ಸಭೆಯಲ್ಲಿ ಪಾಕಿಸ್ತಾನಕ್ಕೆ ಭಾರತ ತೀಕ್ಷ್ಣ ಪ್ರತ್ಯುತ್ತರ
5. ಐಸಿಸಿ ಪುರುಷರ ಟಿ-೨೦ ವಿಶ್ವಕಪ್ ಕ್ರಿಕೆಟ್ ; ಭಾರತ ಮತ್ತು ಜಿಂಬಾಬ್ವೆ ಮುಖಾಮುಖಿ

**********

ಇಸ್ರೇಲ್‌ಗೆ ಎರಡು ದಿನಗಳ ಅಧಿಕೃತ ಭೇಟಿ ನೀಡಿರುವ ಪ್ರಧಾನಿ ನರೇಂದ್ರ ಮೋದಿ, ಭಯೋತ್ಪಾದನೆ ವಿರುದ್ಧದ ಹೋರಾಟದಲ್ಲಿ ಭಾರತವು ಇಸ್ರೇಲ್ ಜೊತೆಗೆ ಪೂರ್ಣ ದೃಢನಿಶ್ಚಯದಿಂದ ನಿಲ್ಲುತ್ತದೆ ಎಂದು ಪುನರುಚ್ಚರಿಸಿದ್ದಾರೆ. ಇಸ್ರೇಲ್ ಸಂಸತ್ತು ನೆಸ್ಸೆಟ್ ಅನ್ನು ಉದ್ದೇಶಿಸಿ ಪ್ರಧಾನಿ ಮಾತನಾಡಿದರು. ಇದರೊಂದಿಗೆ ಇಸ್ರೇಲ್ ಸಂಸತ್ತಿನಲ್ಲಿ ಭಾಷಣ ಮಾಡಿದ ಮೊದಲ ಭಾರತೀಯ ಪ್ರಧಾನಿಯಾಗಿದ್ದಾರೆ. ಭಯೋತ್ಪಾದನೆ ಎಲ್ಲೆಡೆ ಶಾಂತಿಗೆ ಬೆದರಿಕೆಯಾಗಿದೆ ಎಂದು ತಮ್ಮ ಭಾಷಣದಲ್ಲಿ ಪ್ರತಿಪಾದಿಸಿದ ಅವರು, ಈ ಬೆದರಿಕೆಯನ್ನು ಎದುರಿಸುವ ಭಾರತದ ಬಲವಾದ ಸಂಕಲ್ಪವನ್ನು ಒತ್ತಿ ಹೇಳಿದರು. ಪ್ರಧಾನಿ ಅವರ ಭಾಷಣವನ್ನು ಇಸ್ರೇಲ್ ಸಂಸದರು ಪ್ರಶಂಸಿಸಿದರು. ಭಾರತದ ತ್ವರಿತ ಆರ್ಥಿಕ ಬೆಳವಣಿಗೆಯನ್ನು ಪ್ರಧಾನಿ ಅವರು ಎತ್ತಿ ತೋರಿಸಿದರು, ದೇಶವು ವಿಶ್ವದ ಅಗ್ರ ಮೂರು ಆರ್ಥಿಕತೆಗಳಲ್ಲಿ ಒಂದಾಗುವ ಹಾದಿಯಲ್ಲಿದೆ ಎಂದು ಹೇಳಿದರು. ಪ್ರಧಾನಿ ಮೋದಿ ಅವರಿಗೆ ಎರಡು ದೇಶಗಳ ನಡುವಿನ ಕಾರ್ಯತಂತ್ರದ

ಸಂಬಂಧಗಳನ್ನು ಬಲಪಡಿಸುವಲ್ಲಿ ಅವರ ಅಸಾಧಾರಣ ಕೊಡುಗೆಯನ್ನು ಗುರುತಿಸಿ ಇಸ್ರೇಲ್ ಸಂಸತ್ತಿನ ಅತ್ಯುನ್ನತ ಗೌರವವಾದ 'ಸ್ಪೀಕರ್ ಆಫ್ ದಿ ನೆಸ್ಸೆಟ್ ಪದಕ'ವನ್ನು ನೀಡಲಾಯಿತು. ಪ್ರಧಾನಿ ನರೇಂದ್ರ ಮೋದಿ ಈ ಪ್ರಶಸ್ತಿಯನ್ನು ಪಡೆದ ಮೊದಲ ವಿದೇಶಿ ನಾಯಕರಾಗಿದ್ದಾರೆ. ಇದಕ್ಕೂ ಮೊದಲು, ಪ್ರಧಾನಿಯವರು ಟೆಲ್ ಅವಿವ್‌ನಲ್ಲಿ ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಅವರೊಂದಿಗೆ ಮಾತುಕತೆ ನಡೆಸಿದರು. ಉಭಯ ನಾಯಕರು ದ್ವಿಪಕ್ಷೀಯ ಸಂಬಂಧಗಳನ್ನು ಪರಿಶೀಲಿಸಿದರು. ಜತೆಗೆ ಜಲ ಸಂಪನ್ಮೂಲ ನಿರ್ವಹಣೆ, ಕೃಷಿ, ತಂತ್ರಜ್ಞಾನ ಮತ್ತು ಇತರ ಪ್ರಮುಖ ಕ್ಷೇತ್ರಗಳಲ್ಲಿ ಸಹಕಾರವನ್ನು ವಿಸ್ತರಿಸುವ ಬಗ್ಗೆಯೂ ಚರ್ಚಿಸಿದರು. ಇಂದು, ಪ್ರಧಾನಮಂತ್ರಿಯವರು ಜೆರುಸಲೆಮ್‌ನ ಯಾದ್ ವಾಶೆಮ್‌ಗೆ ಭೇಟಿ ನೀಡಲಿದ್ದಾರೆ. ಅಲ್ಲಿ ಅವರು ಹತ್ಯಾಕಾಂಡದ ಸಂತ್ರಸ್ತರಿಗೆ ಗೌರವ ಸಲ್ಲಿಸಲಿದ್ದಾರೆ. ಬಳಿಕ ಪ್ರಧಾನಿ, ಇಸ್ರೇಲ್ ಅಧ್ಯಕ್ಷ ಐಸಾಕ್ ಹೆರ್ಜಾಗ್ ಅವರನ್ನು ಸಹ ಭೇಟಿ ಮಾಡಲಿದ್ದಾರೆ. ನಂತರ ವಿಜ್ಞಾನ ಮತ್ತು ತಂತ್ರಜ್ಞಾನ, ನಾವೀನ್ಯತೆ, ರಕ್ಷಣೆ ಮತ್ತು ಭದ್ರತೆ, ವ್ಯಾಪಾರ ಮತ್ತು ಹೂಡಿಕೆಗೆ ಸಂಬಂಧಿಸಿದಂತೆ ನೆತನ್ಯಾಹು ಅವರೊಂದಿಗೆ ನಿಯೋಗ ಮಟ್ಟದ ಮಾತುಕತೆ ನಡೆಸಲಿದ್ದಾರೆ. ಮಾತುಕತೆಯ ಸಮಯದಲ್ಲಿ, ಒಪ್ಪಂದಗಳನ್ನು ವಿನಿಮಯ ಮಾಡಿಕೊಳ್ಳುವ ನಿರೀಕ್ಷೆಯಿದೆ. ತಮ್ಮ ಭೇಟಿಯ ಅಂತಿಮ ಹಂತದಲ್ಲಿ, ಪ್ರಧಾನಿ ಮೋದಿ ಅವರು ಭಾರತೀಯ ಮೂಲದ ಯಹೂದಿ ಸಮುದಾಯದ ಸದಸ್ಯರೊಂದಿಗೆ ಸಂವಹನ ನಡೆಸಲಿದ್ದಾರೆ.

**********

ಶಿವಮೊಗ್ಗ ಸೇರಿದಂತೆ ಸುತ್ತಮುತ್ತಲಿನ ೮ ಜಿಲ್ಲೆಗಳಿಗೆ ತನ್ನ ಪ್ರಸಾರ ವ್ಯಾಪ್ತಿಯನ್ನು ವಿಸ್ತರಿಸುತ್ತಿರುವ ಆಕಾಶವಾಣಿಯ ೧೦ ಕಿಲೋವ್ಯಾಟ್ ಸಾಮರ್ಥ್ಯದ 'ಎಫ್‌ಎಂ ೧೦೧.೪ ಮೆಗಾಹರ್ಟ್ಸ್' ಟ್ರಾನ್ಸ್ ಮೀಟರ್ ಅನ್ನು ಕೇಂದ್ರ ವಾರ್ತಾ ಮತ್ತು ಪ್ರಸಾರ ಖಾತೆ ರಾಜ್ಯ ಸಚಿವ ಡಾ.ಎಲ್.ಮುರುಗನ್ ಇಂದು ಉದ್ಘಾಟಿಸಿದರು. ಸಮಾರಂಭದಲ್ಲಿ ಸಂಸದ ಬಿ.ವೈ.ರಾಘವೇಂದ್ರ ಹಾಗೂ ಶಾಸಕ ಚನ್ನಬಸಪ್ಪ, ಆಕಾಶವಾಣಿ ಮಹಾನಿರ್ದೇಶಕ ಆರ್.ಕೆ.ಜೈನ್ ಸೇರಿದಂತೆ ಮತ್ತಿತರ ಗಣ್ಯರು ಉಪಸ್ಥಿತರಿದ್ದಾರೆ.

**********

೧೦ ರಾಜ್ಯಗಳ ೩೭ ರಾಜ್ಯಸಭಾ ಸ್ಥಾನಗಳಿಗೆ ದ್ವೈವಾರ್ಷಿಕ ಚುನಾವಣೆಗೆ ಚುನಾವಣಾ ಆಯೋಗ ಅಧಿಸೂಚನೆ ಹೊರಡಿಸಿದೆ. ಇಂದಿನಿಂದ ಮಾರ್ಚ್ ೫ ರವರೆಗೆ ನಾಮಪತ್ರ ಸಲ್ಲಿಸಬಹುದು. ಮುಂದಿನ ತಿಂಗಳು ೧೬ ರಂದು ಮತದಾನ ನಡೆಯಲಿದೆ. ಮಹಾರಾಷ್ಟ್ರದಲ್ಲಿ ಏಳು ಸ್ಥಾನಗಳು, ತಮಿಳುನಾಡಿನಲ್ಲಿ ಆರು ಸ್ಥಾನಗಳು, ಬಿಹಾರ ಮತ್ತು ಪಶ್ಚಿಮ ಬಂಗಾಳದಲ್ಲಿ ತಲಾ ಐದು

ಸ್ಥಾನಗಳು, ಒಡಿಶಾದಲ್ಲಿ ನಾಲ್ಕು ಸ್ಥಾನಗಳು, ಅಸ್ಸಾಂನಲ್ಲಿ ಮೂರು ಸ್ಥಾನಗಳು, ತೆಲಂಗಾಣ, ಛತ್ತೀಸ್‌ಗಢ ಮತ್ತು ಹರಿಯಾಣದಲ್ಲಿ ತಲಾ ಎರಡು ಸ್ಥಾನಗಳು ಮತ್ತು ಹಿಮಾಚಲ ಪ್ರದೇಶದಲ್ಲಿ ಒಂದು ಸ್ಥಾನ ತೆರವಾಗಲಿದೆ. ಕೇಂದ್ರ ಸಚಿವರಾದ ರಾಮನಾಥ್ ಠಾಕೂರ್ ಮತ್ತು ರಾಮದಾಸ್ ಅಠಾವಳೆ, ರಾಜ್ಯಸಭಾ ಉಪಾಧ್ಯಕ್ಷ ಹರಿವಂಶ್, ಎನ್‌ಸಿಪಿ-ಎಸ್‌ಪಿ ನಾಯಕ ಶರದ್ ಪವಾರ್, ಆರ್‌ಎಲ್‌ಎಂ ನಾಯಕ ಉಪೇಂದ್ರ ಕುಶ್ವಾಹ, ಕಾಂಗ್ರೆಸ್ ನಾಯಕ ಅಭಿಷೇಕ್ ಮನು ಸಿಂಘ್ವಿ, ಎಐಎಡಿಎಂಕೆ ನಾಯಕ ಎಂ ತಂಬಿದುರೈ ಮತ್ತು ಡಿಎಂಕೆ ನಾಯಕ ತಿರುಚಿ ಶಿವ ಏಪ್ರಿಲ್‌ನಲ್ಲಿ ಮೇಲ್ಮನೆಯಲ್ಲಿ ತಮ್ಮ ಅಧಿಕಾರಾವಧಿಯನ್ನು ಪೂರ್ಣಗೊಳಿಸುತ್ತಿರುವವರಲ್ಲಿ ಸೇರಿದ್ದಾರೆ. ಮತಪತ್ರದಲ್ಲಿ ಆದ್ಯತೆಗಳನ್ನು ಗುರುತಿಸುವ ಉದ್ದೇಶಕ್ಕಾಗಿ ಚುನಾವಣಾಧಿಕಾರಿ ಒದಗಿಸಿದ ನೇರಳೆ ಬಣ್ಣದ ಸ್ಕೆಚ್ ಪೆನ್ನುಗಳನ್ನು ಮಾತ್ರ ಬಳಸಬೇಕೆಂದು ಚುನಾವಣಾ ಆಯೋಗ ನಿರ್ದೇಶಿಸಿದೆ. ರಾಜ್ಯಸಭಾ ಚುನಾವಣೆಯಲ್ಲಿ ಆದ್ಯತೆಗಳನ್ನು ಗುರುತಿಸಲು ಬೇರೆ ಯಾವುದೇ ಪೆನ್ನು ಬಳಸಬಾರದು ಎಂದು ಆಯೋಗ ಹೇಳಿದೆ. ಮುಕ್ತ ಮತ್ತು ನ್ಯಾಯಯುತ ಚುನಾವಣೆಯನ್ನು ಖಚಿತಪಡಿಸಿಕೊಳ್ಳಲು ವೀಕ್ಷಕರನ್ನು ನೇಮಿಸುವ ಮೂಲಕ ಚುನಾವಣಾ ಪ್ರಕ್ರಿಯೆಯನ್ನು ನಿಕಟವಾಗಿ ಮೇಲ್ವಿಚಾರಣೆ ಮಾಡಲು ಸಾಕಷ್ಟು ಕ್ರಮಗಳನ್ನು ತೆಗೆದುಕೊಳ್ಳಬೇಕು ಎಂದು ಚುನಾವಣಾ ಆಯೋಗ ಹೇಳಿದೆ.

**********

ಇಂದು ಸ್ವಾತಂತ್ರ್ಯ ಹೋರಾಟಗಾರ ವೀರ್ ಸಾವರ್ಕರ್ ಅವರ ಪುಣ್ಯತಿಥಿ. ಈ ಹಿನ್ನೆಲೆ ಸ್ವಾತಂತ್ರ್ಯ ಸೇನಾನಿಗೆ ಪ್ರಧಾನಿ ನರೇಂದ್ರ ಮೋದಿ, ಗೃಹ ಸಚಿವ ಅಮಿತ್ ಶಾ ಮತ್ತು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರು ಗೌರವ ಸಲ್ಲಿಸಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಪ್ರಧಾನಿ ಮೋದಿ, ವೀರ್ ಸಾವರ್ಕರ್ ದೇಶವನ್ನು ಗುಲಾಮಗಿರಿಯ ಸಂಕೋಲೆಯಿಂದ ಮುಕ್ತಗೊಳಿಸಲು ತಮ್ಮ ಜೀವನವನ್ನು ಮುಡಿಪಾಗಿಟ್ಟಿದ್ದಾರೆ ಎಂದು ಹೇಳಿದ್ದಾರೆ. ಸ್ವಾತಂತ್ರ್ಯ ಹೋರಾಟಗಾರರ ವ್ಯಕ್ತಿತ್ವ ಮತ್ತು ಸಾಧನೆಗಳು ಪ್ರತಿ ಪೀಳಿಗೆಗೂ ರಾಷ್ಟ್ರ ಸೇವೆ ಮಾಡಲು ಸ್ಫೂರ್ತಿ ನೀಡುತ್ತಲೇ ಇರುತ್ತವೆ ಎಂದು ಪ್ರಧಾನಿ ತಿಳಿಸಿದ್ದಾರೆ. ವೀರ್ ಸಾವರ್ಕರ್ ಬ್ರಿಟಿಷ್ ಆಳ್ವಿಕೆಯಿಂದ ಸ್ವಾತಂತ್ರ್ಯಕ್ಕಾಗಿ ಮತ್ತು ಸಾಂಸ್ಕೃತಿಕ ಸ್ವಾತಂತ್ರ್ಯಕ್ಕಾಗಿ ಏಕಕಾಲದಲ್ಲಿ ಹೋರಾಡಿದ ಸ್ವಾತಂತ್ರ್ಯ ಚಳವಳಿಯ ನಾಯಕರಲ್ಲಿ ಒಬ್ಬರು ಎಂದು ಗೃಹ ಸಚಿವ ಅಮಿತ್ ಶಾ ಹೇಳಿದ್ದಾರೆ. ವೀರ್ ಸಾವರ್ಕರ್ ಅವರ ಅದಮ್ಯ ಧೈರ್ಯ, ಅಪ್ರತಿಮ ತ್ಯಾಗ ಮತ್ತು ರಾಷ್ಟ್ರಕ್ಕೆ ಅಚಲ ಸಮರ್ಪಣೆ ಭಾರತದ ಸ್ವಾತಂತ್ರ್ಯ ಹೋರಾಟದಲ್ಲಿ ಒಂದು ಅದ್ಭುತ ಅಧ್ಯಾಯವನ್ನು ಗುರುತಿಸುತ್ತದೆ ಎಂದು ಅಮಿತ್ ಶಾ ಶ್ಲಾಘಿಸಿದ್ದಾರೆ.

**********

ಜಿನೀವಾದಲ್ಲಿ ನಡೆಯುತ್ತಿರುವ ವಿಶ್ವಸಂಸ್ಥೆಯ ಮಾನವ ಹಕ್ಕುಗಳ ಮಂಡಳಿಯ ೬೧ ನೇ ಅಧಿವೇಶನದಲ್ಲಿ ಭಾರತ ಪಾಕಿಸ್ತಾನಕ್ಕೆ ತೀಕ್ಷ್ಣವಾದ ಪ್ರತ್ಯುತ್ತರ ನೀಡಿದೆ. ಜಮ್ಮು ಮತ್ತು ಕಾಶ್ಮೀರದ ಅಭಿವೃದ್ಧಿ ಪಥವು ಪಾಕಿಸ್ತಾನದ ಆರ್ಥಿಕ ಸಮಸ್ಯೆಗಳಿಗೆ ಸಂಪೂರ್ಣವಾಗಿ ವಿರುದ್ಧವಾಗಿದೆ ಎಂದು ಪ್ರತಿಪಾದಿಸುವ ಪ್ರಚಾರವನ್ನು ಇಸ್ಲಾಮಾಬಾದ್ ಹರಡುತ್ತಿದೆ ಎಂದು ಭಾರತ ಆರೋಪಿಸಿದೆ. ಇದೇ ೨೩ ರಿಂದ ಆರಂಭವಾಗಿರುವ ಅಧಿವೇಶನವು ಮಾರ್ಚ್ ೩೧ ರವರೆಗೆ ನಡೆಯಲಿದೆ. ನಿನ್ನೆ ನಡೆದ ಉನ್ನತ ಮಟ್ಟದ ಸಭೆಯಲ್ಲಿ, ಭಾರತದ ಪ್ರತಿನಿಧಿ ಅನುಪಮಾ ಸಿಂಗ್ ಅವರು ಪಾಕಿಸ್ತಾನ ಮತ್ತು ಇಸ್ಲಾಮಿಕ್ ಸಹಕಾರ ಸಂಸ್ಥೆ ಮಾಡಿದ ಆರೋಪಗಳನ್ನು ತಿರಸ್ಕರಿಸಲು ದೇಶದ ಪ್ರತ್ಯುತ್ತರ ಹಕ್ಕನ್ನು ಚಲಾಯಿಸಿದರು. ಭಾರತ ಈ ಆರೋಪಗಳನ್ನು ಸ್ಪಷ್ಟವಾಗಿ ತಿರಸ್ಕರಿಸಿದ್ದು, ಪಾಕಿಸ್ತಾನದ ನಿರಂತರ ಪ್ರಚಾರವು ಅಸೂಯೆಯಿಂದ ಕೂಡಿದೆ ಎಂದು ಅನುಪಮಾ ಸಿಂಗ್ ಹೇಳಿದ್ದಾರೆ. ಜಮ್ಮು ಮತ್ತು ಕಾಶ್ಮೀರವು ಯಾವಾಗಲೂ ಭಾರತದ ಅವಿಭಾಜ್ಯ ಮತ್ತು ಬೇರ್ಪಡಿಸಲಾಗದ ಭಾಗವಾಗಿದೆ ಮತ್ತು ಇರುತ್ತದೆ ಎಂಬ ಭಾರತದ ದೀರ್ಘಕಾಲದ ನಿಲುವನ್ನು ಅವರು ಪುನರುಚ್ಚರಿಸಿದರು. ಈ ಪ್ರದೇಶದ ಬಗ್ಗೆ ಬಾಕಿ ಇರುವ ಏಕೈಕ ವಿವಾದವೆಂದರೆ ಪಾಕಿಸ್ತಾನವು ಭಾರತೀಯ ಪ್ರದೇಶಗಳನ್ನು ಅಕ್ರಮವಾಗಿ ಆಕ್ರಮಿಸಿಕೊಂಡಿರುವುದು ಎಂದು ಭಾರತೀಯ ಪ್ರತಿನಿಧಿ ಹೇಳಿದರು.ಜಮ್ಮು ಮತ್ತು ಕಾಶ್ಮೀರದ ಅಭಿವೃದ್ಧಿ ಬಜೆಟ್ ಅಂತರರಾಷ್ಟ್ರೀಯ ಹಣಕಾಸು ನಿಧಿಯಿಂದ ಪಾಕಿಸ್ತಾನ ಕೋರಿದ ಇತ್ತೀಚಿನ ಬೇಲ್‌ಔಟ್ ಪ್ಯಾಕೇಜ್‌ಗಿಂತ ಎರಡು ಪಟ್ಟು ಹೆಚ್ಚಾಗಿದೆ. ಜಮ್ಮು ಮತ್ತು ಕಾಶ್ಮೀರದಲ್ಲಿ ಇತ್ತೀಚೆಗೆ ನಡೆದ ಸಾರ್ವತ್ರಿಕ ಮತ್ತು ವಿಧಾನಸಭಾ ಚುನಾವಣೆಗಳಲ್ಲಿ ಮತದಾರರು ನೀಡಿದ ಮತದಾನವು ಈ ಪ್ರದೇಶದ ಜನರು ಭಯೋತ್ಪಾದನೆ ಮತ್ತು ಹಿಂಸಾಚಾರದ ಸಿದ್ಧಾಂತವನ್ನು ತಿರಸ್ಕರಿಸಿದ್ದಾರೆ ಮತ್ತು ಅಭಿವೃದ್ಧಿಯ ಹಾದಿಯಲ್ಲಿ ಮುನ್ನಡೆಯುತ್ತಿದ್ದಾರೆ ಎಂಬುದಕ್ಕೆ ಸಾಕ್ಷಿಯಾಗಿದೆ ಎಂದು ಅವರು ಉಲ್ಲೇಖಿಸಿದರು. ಜಮ್ಮು ಮತ್ತು ಕಾಶ್ಮೀರ ರಾಜಕೀಯವಾಗಿ, ಆರ್ಥಿಕವಾಗಿ ಮತ್ತು ಸಾಮಾಜಿಕವಾಗಿ ಪ್ರಗತಿ ಸಾಧಿಸುತ್ತಲೇ ಇದೆ ಎಂದು ಪ್ರತಿಪಾದಿಸಿದ ಅನುಪಮಾ ಸಿಂಗ್, ಪಾಕಿಸ್ತಾನವು ನಿರಂತರ ರಾಜ್ಯ ಪ್ರಾಯೋಜಿತ ಭಯೋತ್ಪಾದನೆಯ ಮೂಲಕ ಪ್ರದೇಶವನ್ನು ಅಸ್ಥಿರಗೊಳಿಸಲು ಪ್ರಯತ್ನಿಸುತ್ತಿದೆ ಎಂದು ಆರೋಪಿಸಿದರು.

**********

ಗುಜರಾತ್‌ನಲ್ಲಿರುವ ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ನಡೆಯಲಿರುವ ಐಸಿಸಿ ಪುರುಷರ ಟಿ-೨೦ ವಿಶ್ವಕಪ್ ಕ್ರಿಕೆಟ್‌ನ ಸೂಪರ್ ೮ ಗುಂಪು ೧ ರಲ್ಲಿ ವೆಸ್ಟ್ ಇಂಡೀಸ್ ತಂಡವು ದಕ್ಷಿಣ ಆಫ್ರಿಕಾವನ್ನು ಎದುರಿಸಲಿದೆ. ಪಂದ್ಯ ಮಧ್ಯಾಹ್ನ ೩ ಗಂಟೆಗೆ ಆರಂಭವಾಗಲಿದೆ.

ಚೆನ್ನೈನ ಎಂಎ ಚಿದಂಬರಂ ಕ್ರೀಡಾಂಗಣದಲ್ಲಿ ನಡೆಯಲಿರುವ ಸೂಪರ್ ೮ ಗುಂಪು ೧ರ ಮತ್ತೊಂದು ಪಂದ್ಯದಲ್ಲಿ ಭಾರತ ಮತ್ತು ಜಿಂಬಾಬ್ವೆ ಮುಖಾಮುಖಿಯಾಗಲಿವೆ. ಪಂದ್ಯ ಸಂಜೆ ೭ ಗಂಟೆಗೆ ಆರಂಭವಾಗಲಿದೆ. ಕೊಲಂಬೊದ ಆರ್.ಪ್ರೇಮದಾಸ ಕ್ರೀಡಾಂಗಣದಲ್ಲಿ ಕಳೆದ ರಾತ್ರಿ ನಡೆದ ಐಸಿಸಿ ಪುರುಷರ ಟಿ-೨೦ ವಿಶ್ವಕಪ್ ಕ್ರಿಕೆಟ್‌ನ ಗುಂಪು ೨ ಸೂಪರ್ ಎಂಟರ ಪಂದ್ಯದಲ್ಲಿ ನ್ಯೂಜಿಲೆಂಡ್ ತಂಡ ಶ್ರೀಲಂಕಾವನ್ನು ೬೧ ರನ್‌ಗಳಿಂದ ಸೋಲಿಸಿತು.

**********

ಯಾವುದೇ ವ್ಯಕ್ತಿಯ ಮುಖ, ಧ್ವನಿ ಅಥವಾ ವ್ಯಕ್ತಿತ್ವವನ್ನು ಬಳಸಿಕೊಂಡು ಅವರ ಒಪ್ಪಿಗೆಯಿಲ್ಲದೆ ಕೃತಕ ಅಥವಾ ಸಂಶ್ಲೇಷಿತ ವಿಷಯಗಳನ್ನು ಸೃಷ್ಟಿಸಬಾರದು ಎಂದು ಮಾಹಿತಿ ಮತ್ತು ಪ್ರಸಾರ ಖಾತೆ ಸಚಿವ ಅಶ್ವಿನಿ ವೈಷ್ಣವ್ ಹೇಳಿದ್ದಾರೆ.

ಧ್ವನಿ : ಅಶ್ವಿನಿ ವೈಷ್ಣವ್

ನವದೆಹಲಿಯಲ್ಲಿಂದು ನಡೆದ ಸಮ್ಮೇಳನ್ನುದ್ದೇಶಿಸಿ ಮಾತನಾಡಿದ ಅವರು, ಡಿಜಿಟಲ್ ಪ್ಲಾಟ್‌ಫಾರ್ಮ್‌ಗಳು ತಮ್ಮಲ್ಲಿ ಪ್ರಸಾರವಾಗುವ ವಿಷಯಗಳ ಬಗ್ಗೆ ಸಂಪೂರ್ಣ ಜವಾಬ್ದಾರಿ ಹೊರಬೇಕು. ನಾಗರಿಕರ ಮತ್ತು ಮಕ್ಕಳ ಆನ್‌ಲೈನ್ ಸುರಕ್ಷತೆಯು ಈ ವೇದಿಕೆಗಳ ಪ್ರಮುಖ ಹೊಣೆಯಾಗಿದೆ ಎಂದು ಹೇಳಿದ್ದಾರೆ. ಇದೇ ಸಂದರ್ಭದಲ್ಲಿ ಪ್ಲಾಟ್‌ಫಾರ್ಮ್‌ಗಳು ತಮ್ಮ ಆದಾಯ ಹಂಚಿಕೆ ನೀತಿಗಳನ್ನು ಮರುಪರಿಶೀಲಿಸಬೇಕು. ಈ ವಿಷಯದ ಬಗ್ಗೆ ಸಮಾಜದಲ್ಲಿ ಕಳವಳ ವ್ಯಕ್ತವಾಗುತ್ತಿದ್ದು, ವಿಷಯವನ್ನು ಸೃಷ್ಟಿಸುವವರ ಜೊತೆಗೆ ಪ್ಲಾಟ್‌ಫಾರ್ಮ್‌ಗಳು ನ್ಯಾಯಯುತವಾದ ರೀತಿಯಲ್ಲಿ ಆದಾಯವನ್ನು ಹಂಚಿಕೊಳ್ಳಬೇಕು ಎಂದು ಸಚಿವ ಅಶ್ವಿನಿ ವೈಷ್ಣವ್ ತಿಳಿಸಿದ್ದಾರೆ.

**********